**All India Radio: Bangalore**
**National Bulletins In Kannada**
**20.06.2025 / 19.35 hrs**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**20.06.2025 / 19.35 hrs**

**<><*<><>*><>**

**ಮುಖ್ಯಾಂಶಗಳು**

**೧. ಬಿಹಾರದಲ್ಲಿ ೫ ಸಾವಿರದ ೯೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೨. ನಫೆಡ್‌ನಿಂದ ಶೀಘ್ರದಲ್ಲೇ ರೈತರಿಂದ ಕೃಷಿ ಉತ್ಪನ್ನಗಳ ನೇರ ಖರೀದಿ- ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಘೋಷಣೆ**

**೩. ಎಂಟನೇ ದಿನವೂ ಇಸ್ರೇಲ್-ಇರಾನ್ ನಡುವೆ ಮುಂದುವರಿದ ಕ್ಷಿಪಣಿ ದಾಳಿ**

**೪. ಟೆಸ್ಟ್ ಕ್ರಿಕೆಟ್; ಇಂಗ್ಲೆಂಡ್ ವಿರುದ್ಧ ಟಾಸ್ ಸೋತು ಮೊದಲ ಇನ್ನಿಂಗ್ಸ್ ಆರಂಭಿಸಿರುವ ಭಾರತ**

**<><*<><>*><>**

ಬಿಹಾರದ ಸಿವಾನ್‌ನಲ್ಲಿ ೫ ಸಾವಿರದ ೯೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ನಗರಾಭಿವೃದ್ಧಿ, ಒಳಚರಂಡಿ ನೀರು ಸಂಸ್ಕರಣೆ, ಪ್ರಧಾನಮಂತ್ರಿ ಆವಾಸ್ ಯೋಜನೆ, ರೈಲ್ವೆ ಮತ್ತು ವಿದ್ಯುತ್ ವಲಯಕ್ಕೆ ಈ ಯೋಜನೆಗಳು ಸಂಬಂಧಿಸಿವೆ. ಇದೇ ವೇಳೆ, ೪೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಿಹಾರ ಮತ್ತು ಉತ್ತರ ಪ್ರದೇಶ ಸಂಪರ್ಕಿಸುವ ನೂತನ ವೈಶಾಲಿ-ದಿಯೋರಿಯಾ ರೈಲು ಮಾರ್ಗ ಯೋಜನೆಯನ್ನು ಪ್ರಧಾನಿ ಲೋಕಾರ್ಪಣೆಗೊಳಿಸಿದರು. ಅಲ್ಲದೇ, ಪಾಟಲಿಪುತ್ರ ಮತ್ತು ಗೋರಖ್‌ಪುರ ನಡುವೆ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ಹಸಿರು ನಿಶಾನೆ ತೋರಿದರು. ೧ ಸಾವಿರದ ೮೦೦ ಕೋಟಿ ರೂಪಾಯಿ ವೆಚ್ಚದಲ್ಲಿ 'ನಮಾಮಿ ಗಂಗೆ ಯೋಜನೆಯಡಿ' ೬ ಒಳಚರಂಡಿ ನೀರು ಸಂಸ್ಕರಣಾ ಘಟಕಗಳನ್ನು ಲೋಕಾರ್ಪಣೆಗೊಳಿಸಿದರು. ೩ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ನೀರು ಸರಬರಾಜು, ನೈರ್ಮಲ್ಯ ಮತ್ತು ಎಸ್‌ಟಿಪಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. 'ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ', ೫೩ ಸಾವಿರಕ್ಕೂ ಹೆಚ್ಚು ಫಲಾನುಭವಿಗಳಿಗೆ ನೂತನವಾಗಿ ನಿರ್ಮಿಸಿದ ಮನೆಗಳ ಕೀಲಿಗಳನ್ನು ಪ್ರಧಾನಿ ಹಸ್ತಾಂತರಿಸಿದರು. ನಂತರ ಸಿವಾನ್‌ನಲ್ಲಿ ನಡೆದ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಕಳೆದ ೧೧ ವರ್ಷಗಳಲ್ಲಿ ಬಿಹಾರದ ಸಮೃದ್ಧಿ ಮತ್ತು ತ್ವರಿತ ಬೆಳವಣಿಗೆ ಹಾದಿಗೆ ಕೊಂಡೊಯ್ದಿರುವುದು ಎನ್‌ಡಿಎ ಅಭಿವೃದ್ಧಿಯ ಸಂಕೇತವಾಗಿದೆ ಎಂದು ಹೇಳಿದ್ದಾರೆ. 'ಸಬ್ ಕಾ ಸಾತ್, ಸಬ್ ಕಾ ವಿಕಾಸ್' ಧ್ಯೇಯದಡಿ ಕೇಂದ್ರ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಹೇಳಿದ ಪ್ರಧಾನಿ, ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ವಿರೋಧ ಪಕ್ಷದ ನಾಯಕರು ಅವಮಾನ ಮಾಡಿದ್ದನ್ನು ಜನರು ಇತ್ತೀಚಿಗೆ ಕಂಡಿದ್ದು, ವಿರೋಧ ಪಕ್ಷಕ್ಕೆ ಅವರ ಮೇಲೆ ನಂಬಿಕೆ ಇಲ್ಲ ಎಂದು ಆರೋಪಿಸಿದರು.

**ಧ್ವನಿ: ಪ್ರಧಾನಿ ( ೨೫ ಸೆಕೆಂಡ್ಸ್)**

ನಂತರ ಒಡಿಶಾದ ಭುವನೇಶ್ವರದಲ್ಲಿ ಪ್ರಧಾನಿ ನರೇಂದ್ರ ಮೋದಿ ರೋಡ್ ಶೋ ನಡೆಸಿದರು. ರೋಡ್ ಶೋ ಸಂದರ್ಭದಲ್ಲಿ ಸಾವಿರಾರು ಜನರು ತ್ರಿವರ್ಣ ಧ್ವಜದೊಂದಿಗೆ ಅವರನ್ನು ಸ್ವಾಗತಿಸಿದರು. ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ನೇತೃತ್ವದ ರಾಜ್ಯದ ಮೊದಲ ಬಿಜೆಪಿ ಸರ್ಕಾರ ಒಂದು ವರ್ಷ ಪೂರೈಸಿದ ಅಂಗವಾಗಿ ಭುವನೇಶ್ವರದ ಜನತಾ ಮೈದಾನದಲ್ಲಿ ಸಮಾರಂಭ ಆಯೋಜಿಸಲಾಗಿದೆ.

**<><*<><>*><>**

ಭಾರತದ ರಾಷ್ಟ್ರೀಯ ಕೃಷಿ ಸಹಕಾರಿ ಮಾರುಕಟ್ಟೆ ಒಕ್ಕೂಟ ಲಿಮಿಟೆಡ್- ನಫೆಡ್, ಶೀಘ್ರದಲ್ಲೇ ರೈತರಿಂದ ನೇರ ಖರೀದಿಯನ್ನು ಪ್ರಾರಂಭಿಸಲಿದೆ. ಈ ಮೂಲಕ ಕೃಷಿ ಉತ್ಪಾದನಾ ಪ್ರಕ್ರಿಯೆಯಿಂದ ಮಧ್ಯವರ್ತಿಗಳನ್ನು ಹೊರಹಾಕಲಿದೆ ಎಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಘೋಷಿಸಿದ್ದಾರೆ. ಅಂತಾರಾಷ್ಟ್ರೀಯ ಸಹಕಾರಿ ವರ್ಷದ

ಸಂದರ್ಭದಲ್ಲಿ ಮುಂಬೈನಲ್ಲಿಂದು ನಡೆದ ರಾಷ್ಟ್ರೀಯ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದ ಅವರು, ಈ ಕ್ರಮವು, ರೈತರು ತಮ್ಮ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಪಡೆಯಲು ಸಹಾಯ ಮಾಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಧ್ವನಿ: ಅಮಿತ್ ಶಾ ( ೩೨ ಸೆಕೆಂಡ್ಸ್)**

ಕೇಂದ್ರ ಸರ್ಕಾರ ಶೀಘ್ರದಲ್ಲೇ, ಸಹಕಾರಿ ಮಾದರಿಯನ್ನು ಆಧರಿಸಿದ ವಿಮಾ ಕಂಪನಿಯನ್ನು ಆರಂಭಿಸಲಿದೆ. ದೇಶಾದ್ಯಂತ ೨ ಲಕ್ಷ ಪ್ರಾಥಮಿಕ ಕೃಷಿ ಸಾಲ ಸಂಘಗಳನ್ನು ಸ್ಥಾಪಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದರು. ಮುಂದಿನ ಹತ್ತು ವರ್ಷಗಳಲ್ಲಿ ರಫ್ತು, ಸಾವಯವ ಆಹಾರ ಮತ್ತು ಬಿತ್ತನೆ ಬೀಜಗಳು ಎಂಬ ಮೂರು ಪ್ರಮುಖ ಕ್ಷೇತ್ರಗಳಲ್ಲಿ ದೊಡ್ಡ ಸಹಕಾರಿ ಸಂಸ್ಥೆಗಳು ಸ್ಥಾಪನೆಯಾಗಲಿವೆ. ಇದು ರೈತರ ಜೀವನ ಮಟ್ಟವನ್ನು ಸುಧಾರಿಸಲು ಅಮೂಲ್ಯ ಕೊಡುಗೆ ನೀಡಲಿದೆ ಎಂದು ಸಚಿವ ಅಮಿತ್ ಶಾ ಹೇಳಿದರು.

**<><*<><>*><>**

ಸಹಕಾರ ಮನೋಭಾವವು, ಸಾವಿರಾರು ವರ್ಷಗಳಿಂದ ಭಾರತದ ಮಣ್ಣಿನಲ್ಲಿ ಆಳವಾಗಿ ಬೇರೂರಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಅಂತಾರಾಷ್ಟ್ರೀಯ ಸಹಕಾರಿ ವರ್ಷದ ಅಂಗವಾಗಿ ಮುಂಬೈನಲ್ಲಿಂದು ಆಯೋಜಿಸಿರುವ ರಾಷ್ಟ್ರೀಯ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದ ಅವರು, ಸಾರ್ವತ್ರಿಕ ಕಲ್ಯಾಣದ ಭಾವನೆಯು ಭಾರತದ ನರನಾಡಿಗಳಲ್ಲಿ ಹರಿಯುತ್ತಿದ್ದು, ಇದು ಸಹಕಾರದ ಮೂಲತತ್ವವಾಗಿದೆ ಎಂದರು. ಕೃಷಿ ಆದಾಯ ಹೆಚ್ಚಿಸುವುದು, ಕೃಷಿ ಸಂಬಂಧಿತ ಕೈಗಾರಿಕೆಗಳ ಮೂಲಕ ರೈತರ ಗಳಿಕೆಯನ್ನು ಹೆಚ್ಚಿಸುವುದು ಮತ್ತು ಸುಸ್ಥಿರ ಕೃಷಿಯ ಮೂಲಕ ಪರಿಸರ ಸಮತೋಲನ ಕಾಯ್ದುಕೊಳ್ಳುವ ಗುರಿಯನ್ನು ಕೇಂದ್ರ ಸರ್ಕಾರ ಪ್ರಾರಂಭಿಸಿರುವ ವಿವಿಧ ಯೋಜನೆಗಳು ಹೊಂದಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

**<><*<><>*><>**

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ನೇಪಾಳದಲ್ಲಿರುವ ಭಾರತೀಯ ರಾಯಭಾರ ಕಚೇರಿಯು, ಇಂದು ಪೋಖರಾದ ಫೇವಾ ನದಿ ತೀರದಲ್ಲಿ ಯೋಗ ಅಧಿವೇಶನವನ್ನು ಆಯೋಜಿಸಿತ್ತು. ಫೇವಾ ಸರೋವರವು, ನೇಪಾಳದ ಜನಪ್ರಿಯ ಪ್ರವಾಸಿ ತಾಣವಾಗಿದ್ದು, ಸರೋವರದ ಮಧ್ಯದಲ್ಲಿರುವ ತಾಲ್‌ಬೈರವಿ ದೇವಸ್ಥಾನಕ್ಕೆ ದೋಣಿ ವಿಹಾರ ಸೌಲಭ್ಯವನ್ನು ಹೊಂದಿದೆ. ನೂರಾರು ಯೋಗಪಟುಗಳು ಯೋಗ ಅಧಿವೇಶನದಲ್ಲಿ ಭಾಗವಹಿಸಿದ್ದರು. ಯೋಗ ಫಾರ್ ಒನ್ ಅರ್ಥ್, ಒನ್ ಹೆಲ್ತ್ ಧ್ಯೇಯವಾಕ್ಯದಡಿ ನೇಪಾಳದಲ್ಲಿ ಕಳೆದ ೭೫ ದಿನಗಳಿಂದ ಯೋಗ ಸಂಬಂಧಿ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿವೆ.

**<><*<><>*><>**

ಇಸ್ರೇಲ್ ಮತ್ತು ಇರಾನ್ ನಡುವೆ ಇಂದು ಸತತ ಎಂಟನೇ ದಿನವೂ ಕ್ಷಿಪಣಿ ದಾಳಿ ಮುಂದುವರಿದಿದೆ. ದಕ್ಷಿಣ ಇಸ್ರೇಲ್‌ನ ಬೀರ್‌ಶೆಬಾದಲ್ಲಿ ಇರಾನ್ ನಡೆಸಿದ ಕ್ಷಿಪಣಿ ದಾಳಿಗೆ ಕನಿಷ್ಠ ಐದು ಜನರು ಗಾಯಗೊಂಡಿದ್ದಾರೆ. ಮತ್ತೊಂದೆಡೆ, ಪಶ್ಚಿಮ ಮತ್ತು ಮಧ್ಯ ಇರಾನ್‌ನಲ್ಲಿನ ಮಿಲಿಟರಿ ಮೂಲಸೌಕರ್ಯದ ಮೇಲೆ ಇಸ್ರೇಲ್ ವಾಯುಪಡೆ ದಾಳಿ ಮಾಡಿದೆ. ಇಸ್ರೇಲ್‌ನ ಟಿಬೇರಿಯಾಸ್ ಮತ್ತು ಕೆರ್ಮನ್‌ಶಾ ಪ್ರದೇಶಗಳಲ್ಲಿನ ಕ್ಷಿಪಣಿ ಸಂಗ್ರಹ ಮತ್ತು ಉಡಾವಣಾ ಸೌಲಭ್ಯಗಳ ಮೇಲೆ ಇಸ್ರೇಲ್ ಯುದ್ಧ ವಿಮಾನಗಳು ದಾಳಿ ನಡೆಸಿ, ನಾಶಪಡಿಸಿದೆ.  ಇದೇ ವೇಳೆ ಆಸ್ಟ್ರೇಲಿಯಾ, ಸ್ಲೋವಾಕಿಯಾ ಮತ್ತು ಜೆಕ್ ಗಣರಾಜ್ಯಗಳು ಟೆಹ್ರಾನ್‌ನಲ್ಲಿರುವ ತಮ್ಮ ರಾಯಭಾರ ಕಚೇರಿಗಳಲ್ಲಿ ಕಾರ್ಯಚಟುವಟಿಕೆಗಳು ಸ್ಥಗಿತಗೊಳಿಸಿವೆ. ಏತನ್ಮಧ್ಯೆ, ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಅವರು ಜರ್ಮನಿ, ಫ್ರಾನ್ಸ್ ಮತ್ತು ಬ್ರಿಟನ್‌ನ ವಿದೇಶಾಂಗ ಸಚಿವರನ್ನು ಜಿನೀವಾದಲ್ಲಿ ಭೇಟಿ ಮಾಡಿ, ಪರಿಸ್ಥಿತಿಯನ್ನು ವಿವರಿಸಿದ್ದಾರೆ.

**<><*<><>*><>**

ಭಾರತವು ತನ್ನ ಲಾಜಿಸ್ಟಿಕ್ಸ್ ವೆಚ್ಚದ ಶೇಕಡವಾರು ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಆಕಾಶವಾಣಿ ನ್ಯೂಸ್‌ಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು, ಇದು ದೇಶದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುವ ಸುಮಾರು ಒಂಬತ್ತು ಪ್ರತಿಶತಕ್ಕೆ ಮತ್ತಷ್ಟು ಇಳಿಸಲಿದೆ ಎಂದು ತಿಳಿಸಿದ್ದಾರೆ.

<><*<><>*><>

ಇಂಗ್ಲೆಂಡ್‌ನ ಲೀಡ್ಸ್‌ನ ಹೆಡಿಂಗ್ಲೆ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ತೆಂಡಲ್ಕೂರ್- ಆಂಡರ್ಸನ ಟ್ರೋಫಿ ಟೆಸ್ಟ್ ಕ್ರಿಕೆಟ್‌ನ ೫ ಪಂದ್ಯಗಳ ಸರಣಿಯ ಮೊದಲ ಪಂದ್ಯದಲ್ಲಿ ಭಾರತದ ವಿರುದ್ಧ ಟಾಸ್ ಗೆದ್ದ ಇಂಗ್ಲೆಂಡ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲ ಇನ್ನಿಂಗ್ಸ್ ಆರಂಭಿಸಿರುವ ಭಾರತ, ಇತ್ತೀಚಿನ ವರದಿಯಂತೆ ೪೪ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೮೩ ರನ್ ಮಾಡಿ ಆಡುತ್ತಿದೆ.

<><*<><>*><>

ಹಾಕಿ ಇಂಡಿಯಾ ಮಾಸ್ಟರ್ಸ್ ಕಪ್ ಪಂದ್ಯಾವಳಿಯ ಇಂದು ನಡೆದ ಮಹಿಳಾ ಪೂಲ್ ಎ ಪಂದ್ಯದಲ್ಲಿ ಹಾಕಿ ಹಿಮಾಚಲ ತಂಡವು ಕೇರಳ ವಿರುದ್ಧ ೪-೧ ಅಂತರದಲ್ಲಿ ಜಯಗಳಿಸಿತು. ಮತ್ತೊಂದು ಪಂದ್ಯದಲ್ಲಿ ಹಿಮಾಚಲ ತಂಡವು ಕೇರಳ ವಿರುದ್ಧ ೪-೧ ಅಂತರದಲ್ಲಿ ಜಯಗಳಿಸಿತು. ಇಂದು ನಡೆದ ಪುರುಷರ ಪೂಲ್ ಎ ಪಂದ್ಯದಲ್ಲಿ ಆಂಧ್ರಪ್ರದೇಶ ಮತ್ತು ಕೇರಳ ತಂಡಗಳು ೩-೩ ಅಂತರದಲ್ಲಿ ಡ್ರಾ ಸಾಧಿಸಿದವು.

<><*<><>*><>

ನವದೆಹಲಿಯಲ್ಲಿ ನಡೆಯಲಿರುವ ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ೨೦೨೫ರ ಲೋಗೋ, ಮ್ಯಾಸ್ಕಾಟ್ ಮತ್ತು ಧ್ವಜವನ್ನು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅನಾವರಣಗೊಳಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ೧೦೦ಕ್ಕೂ ಹೆಚ್ಚು ದೇಶಗಳು ಮತ್ತು ೨ ಸಾವಿರದ ೫೦೦ ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸುತ್ತಿದ್ದಾರೆ ಎಂದು ತಿಳಿಸಿದರು. ಈ ಕ್ರೀಡಾಕೂಟವು ಸೆಪ್ಟೆಂಬರ್ ೨೭ ರಿಂದ ಅಕ್ಟೋಬರ್ ೫ ರವರೆಗೆ ನವದೆಹಲಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ನಡೆಯಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ <>*><>**